**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.746/2022**

| | | |
|---|---|---|
| ಸಾಕ್ಷಿದಾರರ ಹೆಸರು | : ಸುಕೇಶ್ ಆರ್ | ಪ್ರಾಸಾ-1 |
| ತಂದೆಯ ಹೆಸರು | : ರಾಮಚಂದ್ರ | ಚಾಸಾ-1 |
| ವಯಸ್ಸು | : 28 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 07.02.2026. |
| ವಾಸಸ್ಥಳ | : ಹೊರನಾಡು | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ ಆರೋಪಿಗಳ ಪರಿಚಯ ನನಗಿದೆ, ಸದರಿಯವರು ನನ್ನ ಸಂಭಂದಿಕರಾಗಿರುತ್ತಾರೆ. ಚಾಸಾ-2 ನನ್ನ ತಾಯಿ. ಚಾಸಾ-3 ರಿಂದ 6 ರವರ ಪರಿಚಯ ನನಗಿದೆ. ಚಾಸಾ-7 ನನ್ನ ತಂದೆ.

ಸಾಕ್ಷಿಯು ದಿ.05.06.2022 ರಂದು ನೀಡಿದ ದೂರು ಮತ್ತು ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ, ಸದರಿ ದೂರನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ನಿಪಿ-1 ರಲ್ಲಿ ಬರೆದಿರುವ ವಿಷಯದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಸಾಕ್ಷಿಗೆ ಒಂದು ಕಬ್ಬಿಣದ ರಾಡನ್ನು ತೋರಿಸಲಾಗಿ ಸಾಕ್ಷಿಯು ಅದರ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದು ನುಡಿಯುತ್ತಾರೆ. ನಾನು ಕೂಲಿ ಕೆಲಸಕ್ಕೆ ಹೋದ ಸಮಯಕ್ಕೆ ಹೋದ ಸಮಯದಲ್ಲಿ ಬಿದ್ದು ಪೆಟ್ಟು ಮಾಡಿಕೊಂಡು ಆಸ್ಪತ್ರೆಗೆ ದಾಖಲಾದ ಸಮಯದಲ್ಲಿ ಪೋಲಿಸರು ಕೆಲವು ದಾಖಲಾತಿಗಳಿಗೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸದರಿ ದಾಖಲಾತಿಯಲ್ಲಿ ಏನನ್ನು ಬರೆಯಲಾಗಿದೆ ಎಂದು ನನಗೆ ಮಾಹಿತಿ ಇರುವುದಿಲ್ಲ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಆರೋಪಿಗಳು ನನ್ನ ಸಂಬಂಧಕರಾಗಬೇಕು ಎಂದರೆ ಸರಿ. ದಿ.05.06.2022 ರಂದು ಮ.3.30 ರ ಸಮಯದಲ್ಲಿ ನಾವು ನಮ್ಮ ಮನೆಯಲ್ಲಿದ್ದಾಗ ಆರೋಪಿಗಳು ತೋಟದ ಬೇಲಿಯನ್ನು ಕಿತ್ತು ಹಾಕುತ್ತಿದ್ದುದ್ದನ್ನು ಬಂದು ನಾನು ಕೇಳಲಾಗಿ 1 ನೇ ಆರೋಪಿಯು ನನಗೆ ಅವಾಚ್ಯ ಶಬ್ದದಿಂದ ಬೈದರು ಎಂದರೆ ಸರಿಯಲ್ಲ. ಆತ ತಂದಿದ್ದ ಕಬ್ಬಿಣದ ರಾಡಿನಿಂದ ನನ್ನ ಎರಡೂ ಕಾಲುಗಳಿಗೆ

ಹೊಡೆದರು ಎಂದರೆ ಸರಿಯಲ್ಲ. ನಾನು ಕೂಗಾಡಿದ್ದನ್ನು ಕೇಳಿ ಚಾಸಾ-2 ರವರು ಸ್ಥಳಕ್ಕೆ ಬಂದಾಗ 2 ನೇ ಆರೋಪಿಯು ಅವಾಚ್ಯ ಶಬ್ದದಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ ಮತ್ತು ನಿನ್ನ ಎದೆಗೆ ಹೊಡೆದು ಈ ದಿನವೇ ಸಾಯಿಸುತ್ತೇನೆ ಎಂದು ಜೀವ ಬೆದರಿಕೆಯನ್ನು ಹಾಕಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ 3 ನೇ ಆರೋಪಿಯು ನನಗೆ ಅವಾಚ್ಯ ಶಬ್ದದಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಚಾಸಾ-2 ರವರಿಗೂ ಸಹಾ ಆರೋಪಿಗಳು ಅವಾಚ್ಯ ಶಬ್ದ ದಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಇದರ ಕುರಿತು ದಿ.05.06.2022 ರಂದು ನಿಪಿ-1 ರಂತೆ ಕಳಸ ಸರ್ಕಾರಿ ಆಸ್ಪತ್ರೆಯಲ್ಲಿ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗಳು ನನ್ನ ಸಂಬಂಧಿಕರಾದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.